## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ– ವಿಚಾರಣಾಧಿಕಾರಿ/ ಮತ್ತು ಮಂಡನಾಧಿಕಾರಿಯವರ ನೇಮಕ ಮಾಡುವ ಬಗ್ಗೆ ಆದೇಶ

**ಓದಲಾಗಿದೆ:–**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ:ಇಎಸ್‌ಟಿ (1)/51/2013–14/ 11860, ದಿನಾಂಕ:05.12.2019
2. ಸರ್ಕಾರದ ಕಾರಣ ಕೇಳುವ ನೋಟಿಸ ದಿನಾಂಕ:16.01.2020
3. ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ ರವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ:18.02.2020

***

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಶ್ರೀ ಪಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಹೆಚ್.ಡಿ.ಕೋಟೆ (ಹಾಲಿ ಕಾರ್ಯಪಾಲಕ ಇಂಜಿನಿಯರ್) ಇವರು ಮೊದಲನೇ ಹೆಂಡತಿ ಇದ್ದರೂ ಶ್ರೀಮತಿ ಎಸ್.ಮಮತ, ಮೈಸೂರು ಇವರನ್ನು ಎರಡನೇ ವಿವಾಹವಾಗಿರುವುದು ಹಾಗೂ ಸದರಿಯವರ ನಿವಾಸದ ಮೇಲೆ ರೆಪ್ಕೋ ಬ್ಯಾಂಕಿನಿಂದ ರೂ.20..00ಲಕ್ಷಗಳ ಸಾಲವನ್ನು ಪಡೆದು ವೈಯಕ್ತಿಕ ಉದ್ದೇಶಗಳಿಗೆ ಬಳಸಿಕೊಂಡು ಶ್ರೀಮತಿ ಎಸ.ಮಮತ ರವರಿಗೆ ಮೋಸ ಮಾಡಿರುವುದು ಮೇಲ್ನೋಟಕ್ಕ ಕಂಡ ಬಂದ ಹಿನ್ನಲೆಯಲ್ಲಿ ಸದರಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸರ್ಕಾರವು ಸದರಿ ಪ್ರಸ್ತಾವನೆ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ಪಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಹೆಚ್.ಡಿ. ಕೋಟೆ (ಹಾಲಿ ಕಾರ್ಯಪಾಲಕ ಇಂಜಿನಿಯರ್) ಇವರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡು ಬಂದ ಹಿನ್ನಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆಯನ್ನು ಜರುಗಿಸಲು ಮೇಲೆ ಓದಲಾದ(2)ರಲ್ಲಿ ದೋಷಾರೋಪಣೆ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಲಾಗಿತ್ತು.

ದೋಷಾರೋಪಣೆ ಪಟ್ಟಿಯೊಂದಿಗೆ ಜಾರಿ ಮಾಡಲಾಗಿದ್ದ ಕಾರಣ ಕೇಳುವ ನೋಟಿಸ್‌ಗೆ ಪ್ರತಿಯಾಗಿ ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ್ ರವರು ಮೇಲೆ ಓದಲಾದ (3)ರಲ್ಲಿ ಲಿಖಿತ ಹೇಳಿಕೆ ಸಲ್ಲಿಸಿ, ತಮ್ಮ ವಿರುದ್ಧ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈ ಬಿಡುವಂತೆ ಕೋರಿರುತ್ತಾರೆ.

ಈ ಬಗ್ಗೆ ಕೂಲಕಂಷವಾಗಿ ಪರಿಶೀಲಿಸಲಾಗಿ, ಶ್ರೀಮತಿ ಎಸ್.ಮಮತ ಇವರ ಜೊತೆ ಆಪಾದಿತ ಅಧಿಕಾರಿಯಾದ ಶ್ರೀ ಪಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಹೆಚ್.ಡಿ.ಕೋಟೆ (ಹಾಲಿ ಕಾರ್ಯಪಾಲಕ ಇಂಜಿನಿಯರ್) ಇವರು ವೈಯಕ್ತಿಕ ಛಾಯಾಚಿತ್ರಗಳನ್ನು ತೆಗೆಸಿಕೊಂಡಿರುವುದು, ಸದರಿಯವರು REPCO BANKನಲ್ಲಿ ಸಾಲ ಪಡೆಯುವ ಸಂಬಂಧ ಸಲ್ಲಿಸಿರುವ ಎಲ್ಲಾ ದಾಖಲೆಗಳಲ್ಲಿ ಶ್ರೀಮತಿ ಎಸ್.ಮಮತ ಗಂಡ ಎಸ್. ಮಹೇಶ ಎಂದು ದಾಖಲಿಸಿರುವುದು, ಸದರಿ ಎಲ್ಲಾ ದಾಖಲೆಗಳಿಗೂ

ಶ್ರೀ ಎಸ್.ಮಹೇಶ ಸಹಿ ಮಾಡಿರುವುದನ್ನು ಗಮನಿಸಿದ ಆರೋಪದ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 104ಇಎನ್‌ಕ್ಯೂ 2019 ಬೆಂಗಳೂರು ದಿನಾಂಕ:08.04.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಪಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಹೆಚ್.ಡಿ.ಕೋಟೆ (ಹಾಲಿ ಕಾರ್ಯಪಾಲಕ ಇಂಜಿನಿಯರ್) ಇವರಿಗೆ ದಿನಾಂಕ:16.01.2020ರಂದು ಕಾರಣ ಕೇಳುವ ನೋಟಿಸಿನೊಂದಿಗೆ ಜಾರಿ ಮಾಡಲಾದ ದೋಷಾರೋಪಣೆ ಪಟ್ಟಿಯಲ್ಲಿ ಮಾಡಿರುವ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗಿಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು- 1957ರ ನಿಯಮ 11ರನ್ವಯ ವಿಚಾರಣೆ ನಡೆಸಲು ಶ್ರೀ ಜೆ.ಎಸ.ಸೋಮಶೇಖರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಗಳ ನಿಯಮ 11(5)(ಸಿ)ರ ಪ್ರಕಾರ ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಟಕ ನಾಗರೀಕ ಸೇವಾ(ವರ್ಗಿಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957ರ ನಿಯಮ 11ರಲ್ಲಿ ನಿಗದಿಪಡಿಸಿರುವ ಕಾರ್ಯವಿಧಾನ ಅನುಸರಿಸಿ ವಿಚಾರಣೆ ಜರುಗಿಸಿ ವಿಚಾರಣೆ ವರದಿಯನ್ನು ಅವಶ್ಯಕ ದಾಖಲಾತಿಗಳೊಂದಿಗೆ ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಸದರಿ ಇಲಾಖಾ ವಿಚಾರಣೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕೇಂದ್ರ ಕಚೇರಿ ಬೆಂಗಳೂರು ಇಲ್ಲಿ ನಡೆಸುವುದು ಹಾಗೂ ಸದರಿ ಇಲಾಖಾ ವಿಚಾರಣೆಗೆ ಅವಶ್ಯವಿರುವ ಲೇಖನ ಸಾಮಗ್ರಿ ಹಾಗೂ ಸಿಬ್ಬಂದಿ ಸಹಾಯವನ್ನು ನೀಡುವಂತೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

08/04/2020
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದ ರಾವ್, ವೃತ್ತ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದ), ಕೆ.ಆರ್.ಸರ್ಕಲ್, ಬೆಂಗಳೂರು
5. ಶ್ರೀ ಜೆ.ಎಸ್.ಸೋಮಶೇಖರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1327, 11ನೇ ಮುಖ್ಯ ರಸ್ತೆ, ಜಿ.ಕೆ.ವಿ.ಕೆ. ಯಲಹಂ, ಬೆಂಗಳೂರು-560065(ಮೊ.9449162238)
6. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು
7. ತಾಂತ್ರಿಕ ಸಹಾಯಕ , ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು

8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, (ಸೇವೆಗಳು–ಎ&ಸಿ) ವಿಕಾಸಸೌಧ ಬೆಂಗಳೂರು.
9. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾ ರ್ಯದರ್ಶಿ / ಆಪ್ತ ಸಹಾಯಕರಿಗೆ.
11. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
12. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.